ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–295

**26 ನವೆಂಬರ್ 2022 * ಶನಿವಾರ * ಸಂಜೆ 6.00**
**87, ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಮೈಸೂರು–28**

---

ದಿವ್ಯ ಆಶೀರ್ವಾದ
**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

ಅಧ್ಯಕ್ಷತೆ
**ಶ್ರೀಮತಿ ಲೀಲಾ ಶಿವಕುಮಾರ್**
ಸಮಾಜ ಸೇವಕರು

ಉಪನ್ಯಾಸ
**ಡಾ. ಎಂ.ಎನ್. ನಂದೀಶ್ ಹಂಚೆ**
ಸಹಾಯಕ ಪ್ರಾಧ್ಯಾಪಕರು, ಜೆಎಸ್‌ಎಸ್ ಕಾಲೇಜು, ಮೈಸೂರು

**ವಿಷಯ : ವಚನಗಳಲ್ಲಿ ಕೌಟುಂಬಿಕ ಸಾಮರಸ್ಯ**

ಭಜನೆ
**ಶ್ರೀ ಶಿವರಾತ್ರೀಶ್ವರ ಭಜನಾ ಮಂಡಳಿ ಮತ್ತು ಲಲಿತಾದ್ರಿ ಮಹಿಳಾ ಬಳಗ**
ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಮೈಸೂರು

---

ಪ್ರಾಯೋಜಕರು
**ಶ್ರೀಮತಿ ಸಿ. ಗೀತಾ ಮಲ್ಲೇಶಪ್ಪ**
ಶಿಕ್ಷಕರು, ಜೆಎಸ್‌ಎಸ್ ಪ್ರೌಢಶಾಲೆ, ದೇವಲಾಪುರ, ಮೈಸೂರು ತಾ.
ಮತ್ತು
**ಶ್ರೀ ಜಿ. ಮಲ್ಲೇಶಪ್ಪ**
ಸಂಸ್ಥಾಪಕ ಅಧ್ಯಕ್ಷರು, ಸ್ವಾಮಿ ವಿವೇಕಾನಂದ ಸೇವಾ ಟ್ರಸ್ಟ್

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996 ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀಮತಿ ಲೀಲಾ ಶಿವಕುಮಾರ್‌ರವರು** ಸಮಾಜ ಸೇವಕರು. ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಜಮ್ಮನಹಳ್ಳಿ ಗ್ರಾಮದವರು. ವಿದ್ಯಾಭ್ಯಾಸದ ಅವಧಿಯಿಂದಲೇ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುತ್ತಾರೆ. ಪ್ರಸ್ತುತ ಸರ್ದಾರ್ ವಲ್ಲಭಾಯಿ ಪಟೇಲ್ ನಗರದಲ್ಲಿ ಗಾಂಧಿ ಸರ್ವೋದಯ ಮಂಡಲದ ಅಧ್ಯಕ್ಷರಾಗಿರುತ್ತಾರೆ. ಕ್ಲೀನ್ ಮೈಸೂರು ಫೌಂಡೇಶನ್ ಸಂಸ್ಥೆಯ ನಿರ್ದೇಶಕರು ಹಾಗೂ ಮೈಸೂರು ಪರಿಸರ ಬಳಗದ ಸದಸ್ಯರಾಗಿರುತ್ತಾರೆ. ಪತಿ ಶ್ರೀ ಶಿವಕುಮಾರ್‌ರವರು ನಿವೃತ್ತ ಪೊಲೀಸ್ ಅಧೀಕ್ಷಕರು. ಮಗಳು ಶ್ರೀಮತಿ ಕಾವ್ಯಾನಂದನ್, ಮಗ ಶ್ರೀ ಗೋಕುಲ್.

**ಡಾ. ಎಂ.ಎನ್. ನಂದೀಶ ಹಂಚೆಯವರು** ಮೈಸೂರು ತಾಲ್ಲೂಕಿನ ಹಂಚ್ಯಾ ಗ್ರಾಮದವರು. ಎಂಎ, ಎಂಫಿಲ್ ಹಾಗೂ ಪಿಎಚ್‌ಡಿ ಪಡೆದಿರುತ್ತಾರೆ. ಜೆಎಸ್‌ಎಸ್ ಪದವಿ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕೆಂಡದೊಳಗಣ ಬೇರು, ದುಡಿ, ಅಲ್ಲಮ ಮತ್ತು ಅರಾಜಕತೆ, ಶಿವರಾಮ ಕಾರಂತರ ಕಾದಂಬರಿಗಳಲ್ಲಿ ಸಾಮಾಜಿಕ ಪ್ರಜ್ಞೆ ಸೇರಿದಂತೆ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಶಿವಪದರತ್ನಕೋಶ ಸೇರಿದಂತೆ ವಿವಿಧ ಗ್ರಂಥಗಳ ಸಂಪಾದಕರು. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುತ್ತಾರೆ. ವಿವಿಧ ಪತ್ರಿಕೆಗಳಲ್ಲಿ ಇವರ ಕಥೆಗಳು, ಲೇಖನಗಳು ಪ್ರಕಟಗೊಂಡಿವೆ. ಮೈಸೂರು ತಾಲ್ಲೂಕು 4ನೇ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದರು. ವಿವಿಧ ಸಂಘ ಸಂಸ್ಥೆಗಳಿಂದ ಪ್ರಶಸ್ತಿ, ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀ ಜಿ. ಮಲ್ಲೇಶಪ್ಪರವರು** ಸ್ವಾಮಿ ವಿವೇಕಾನಂದ ಸೇವಾ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರು. ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯರು ಹಾಗೂ ವನ್ಯಜೀವಿ ಪರಿಪಾಲಕರಾಗಿದ್ದಾರೆ. ಗಿರಿಜನ ಯುವಕರನ್ನು ಒಗ್ಗೂಡಿಸಿ ಗುಡಿಕೈಗಾರಿಕೆಗಳನ್ನು ನಡೆಸಲು ಪ್ರೋತ್ಸಾಹಿಸುತ್ತಿದ್ದಾರೆ. ಗಿರಿಜನ ಮಹಿಳೆಯರು, ಯುವಕರು ಮತ್ತು ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಸಮುದಾಯ ಅಭಿವೃದ್ಧಿ ಕಾರ್ಯಗಳಲ್ಲಿ ವಿಶೇಷವಾದ ಆಸಕ್ತಿಯನ್ನು ಹೊಂದಿದ್ದಾರೆ. ಶ್ರೀಮತಿ ಸಿ.ಗೀತಾ ಮಲ್ಲೇಶಪ್ಪನವರು ಮೈಸೂರು ತಾಲ್ಲೂಕು ದೇವಲಾಪುರ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಪುತ್ರಿಯರುಗಳಾದ ಕು. ಸುಶ್ಮಿತಾ ಮಲ್ಲೇಶ್‌ರವರು ಸಾಫ್ಟ್‌ವೇರ್ ಇಂಜಿನಿಯರ್ ಮತ್ತು ಕು. ಅದಿತಿ ಮಲ್ಲೇಶ್‌ರವರು ಮೈಸೂರು ಶ್ರೀ ಜಯಚಾಮರಾಜೇಂದ್ರ ಇಂಜಿನಿಯರಿಂಗ್ ಕಾಲೇಜಿನಲ್ಲಿ ಬಿಇ ವ್ಯಾಸಂಗ ಮಾಡುತ್ತಿದ್ದಾರೆ.